# ಕರ್ನಾಟಕ ಸರ್ಕಾರದ ನಡವಳಿಗಳು

ನಂ 1921
ದಿನಾಂಕ 19/11/21
ಬೆಂಗಳೂರು

**ವಿಷಯ :** M/s Clean Max Scorpius Private Limited ಕಂಪನಿಯವರು ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಿರುವ 13.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 16.2 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 243 ಎನ್‌ಸಿಇ 2020, ದಿನಾಂಕ:15.12.2020
2. ಸರ್ಕಾರದ ಪತ್ರ ಸಂಖ್ಯೆ:ಎನರ್ಜಿ 170 ಎನ್‌ಸಿಇ 2021, ದಿನಾಂಕ:05.08.2021
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರ ಪತ್ರ ಸಂಖ್ಯೆ: KREDL/08/CMSPL – 13.5 to 16.2 MW/Jagalur/F-68 (2021)/3034, ದಿನಾಂಕ:28.10.2021.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದನ್ವಯ M/s CMES Jupiter Private Limited ಕಂಪನಿಯವರಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ತಮದಿಹಳ್ಳಿ, ಕಸವನಹಳ್ಳಿ, ಕೊರಸರಹಟ್ಟಿ, ಗೊಲ್ಲರಹಟ್ಟಿ, ಹನುಮಂತಪುರ, ಗೋಗುಡ್ಡು, ತಿಮ್ಮಲಾಪುರ್, ಸಿದ್ದಮ್ಮನಹಳ್ಳಿ, ಬಂಗಾರಕ್ಕನಗುಡ್ಡ, ಮೂಲಮಾಚಿಕೆರೆ, ಕಮಗೇತನಹಳ್ಳಿ, ಭರಮಸಮುದ್ರ, ಉದ್ದುಘಟ್ಟ ಮತ್ತು ಜಗಳೂರು ಗ್ರಾಮದಲ್ಲಿ ಹಂಚಿಕೆಯಾಗಿರುವ 70 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 13.5 ಮೆ.ವ್ಯಾ ಸಾಮರ್ಥ್ಯವನ್ನು ಸಮೂಹ ಸ್ವಂತ ಬಳಕೆ ವರ್ಗದಡಿ M/s Clean Max Scorpius Private Limited ರವರಿಗೆ ವರ್ಗಾಯಿಸಿ ಆದೇಶಿಸಲಾಗಿತ್ತು. ಸದರಿಯವರು 13.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ದಿನಾಂಕ:03.02.2021 ರಂದು ಅನುಷ್ಠಾನಗೊಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಪತ್ರದನ್ವಯ M/s Clean Max Scorpius Private Limited ರವರು ಅನುಷ್ಠಾನಗೊಳಿಸಿರುವ 13.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಸಮೂಹ ಸ್ವಂತ ಬಳಕೆ ಮಾಡಿಕೊಂಡು ಉಳಿದ ವಿದ್ಯುತ್ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿತ್ತು.

MD KREDL

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರು M/s Clean Max Scorpius Private Limited ರವರು ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಿರುವ 13.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 16.2 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಬೇಕೆಂದು ಕೋರಿ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಸಮೂಹ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿಯಲ್ಲಿ ಹಂಚಿಕೆ ಮಾಡುವಂತೆ ಕೋರಿ, ಸಂಬಂಧಿಸಿದ ಶುಲ್ಕವನ್ನು ಸಂದಾಯ ಮಾಡಿರುವುದಾಗಿ ಹಾಗೂ ಮೂಲ ಅಭಿವೃದ್ಧಿದಾರರಾದ M/s CMES Jupiter Private Limited ರವರು ಸದರಿ ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ತಮ್ಮ ಸಹಮತಿ ಇರುವ ಬಗ್ಗೆ ನಿರಾಕ್ಷೇಪಣಾ ಪತ್ರವನ್ನು ನೀಡಿರುವುದಾಗಿ ತಿಳಿಸುತ್ತಾ, ಸಾಮರ್ಥ್ಯ ಹೆಚ್ಚಿಸಬಹುದೆಂಬ ಅಭಿಪ್ರಾಯದೊಂದಿಗೆ, ಸರ್ಕಾರಕ್ಕೆ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆ ಸಲ್ಲಿರುತ್ತಾರೆ.

A TO-P

Wind Section
No. 2020/1599
Date 23.11.21
Sig

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 254 ಎನ್‌ಸಿಇ 2021**
**ಬೆಂಗಳೂರು ದಿನಾಂಕ:16.11.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Clean Max Scorpius Private Limited ರವರು ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಿರುವ 13.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಶೆಡ್ಯೂಲ್ ಹಾಗೂ ಷರತ್ತಿಗೊಳಪಟ್ಟು 16.2 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಿದೆ.

**Land Details for enhanceable capacity of 2.7 MW (Enhancement from commissioned 13.5 to 16.2 MW) of M/s Clean Max Scorpius Private Limited**

| Sl. No | Village Name | Taluk/District | MW | Survey No. | Extent of Land (Acres) | WTG No. | RR No. | Latitude and Longitude |
|---|---|---|---|---|---|---|---|---|
| 1 | Mudalamachi kere | Jagalur/ Davanagere | 2.7 | 30 | 4.00 | J18 | S8HT457 and AVHT 4 | 14°30’43.78”N, 76°25’16.18”E |
| | Total | | 2.7 | | | | | |

## ಷರತ್ತುಗಳು

1. M/s Clean Max Scorpius Private Limited ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ:ಇಎನ್ 435 ಎನ್.ಸಿ.ಇ 2011, ದಿನಾಂಕ:06.01.2012ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಪೂರಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. M/s Clean Max Scorpius Private Limited ರವರು ಯೋಜನೆಯ ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿಪಡಿಸಿರುವ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.
3. M/s Clean Max Scorpius Private Limited ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಸಮೂಹ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಕುರಿತು ಕೆಪಿಟಿಸಿಎಲ್/ಸಂಬಂಧಿಸಿದ ಎಸ್ಕಾಂಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
4. ಈ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

....3

ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 243 ಎನ್‌ಸಿಇ 2020, ದಿನಾಂಕ:15.12.2020 ರಲ್ಲಿನ ಷರತ್ತುಗಳು ಯಥಾವತ್ತಾಗಿ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. Mangalagowri 16/11/21

(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

16/11/21

**ಇವರಿಗೆ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
5. ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಪ್ರಾದೇಶಿಕ ವಿಭಾಗ, ದಾವಣಗೆರೆ ಜಿಲ್ಲೆ, ದಾವಣಗೆರೆ.
8. M/s Clean Max Scorpius Private Limited No.13A, Floor-13, Plot-400, The Peregrine Apartment, Kismat Cinema, Prabhadevi, Mubai-400025.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
10. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು